ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ದೂರವಾಣಿ ಸಂಖ್ಯೆ:080-22343980

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಬೆಂಗಳೂರು, ದಿನಾಂಕ:10.11.2017

ಸಂಖ್ಯೆ:ಕಾಶಿಇ/ಶೈವಿ/47/ಸುತ್ತೋಲೆ/2016-17/ಭಾಗ-2

# ಸುತ್ತೋಲೆ

ವಿಷಯ: ವಿಶ್ವ ಮಕ್ಕಳ ಹಕ್ಕು ದಿನಾಚರಣೆ ಆಚರಿಸುವ ಬಗ್ಗೆ.

ಉಲ್ಲೇಖ: 1. ಮಾನ್ಯ ಉನ್ನತ ಶಿಕ್ಷಣ ಮಂತ್ರಿಗಳು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರು ಇವರ ಟಿಪ್ಪಣಿ ಸಂಖ್ಯೆ:ಉಶಿಮಂ/5059/2017, ದಿನಾಂಕ:08.11.2017.

2. ಅಧ್ಯಕ್ಷರು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಬೆಂಗಳೂರು ಇವರ ಪತ್ರ ಸಂಖ್ಯೆ:ಕರಾಮಹರಾ/ಆಡಳತ/ವಿ.ಮದಿ/2017/778, ದಿನಾಂಕ:08.11.2017

******

ಸೂಚಿತ ವಿಷಯಕ್ಕೆ ಸಂಬಂಧಿಸಿದಂತೆ, ದಿನಾಂಕ:20.11.2017 ರಂದು ಬೆಳಗಾವಿಯಲ್ಲಿ ನಡೆಯುವ **"ವಿಶ್ವ ಮಕ್ಕಳ ಹಕ್ಕು ದಿನಾಚರಣೆ"** ಕಾರ್ಯಕ್ರಮಕ್ಕೆ ಬೆಳಗಾವಿಯ ಎಲ್ಲಾ ಕಾಲೇಜುಗಳ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರು ಕಡ್ಡಾಯವಾಗಿ ಭಾಗವಹಿಸಲು ಸಂಬಂಧಿಸಿದ ಕಾಲೇಜುಗಳ ಪ್ರಾಂಶುಪಾಲರು/ಮುಖ್ಯಸ್ಥರುಗಳಿಗೆ ನಿರ್ದೇಶನ ನೀಡಲು ಉಲ್ಲೇಖಿತ ಪತ್ರಗಳಲ್ಲಿ ಸೂಚಿಸಲಾಗಿರುತ್ತದೆ.

ದಿನಾಂಕ:20.11.2017ರಂದು ಬೆಳಗಾವಿಯ ಜಿಲ್ಲೆಯ ಶೇಕ್ ಕಾಲೇಜು ಮೈದಾನದಲ್ಲಿ ಆಯೋಜಿಸಿರುವ **"ವಿಶ್ವ ಮಕ್ಕಳ ಹಕ್ಕು ದಿನಾಚರಣೆ"** ಕಾರ್ಯಕ್ರಮದ ಮೂಲಕ ಮಕ್ಕಳ ಹಕ್ಕುಗಳ ಬಗ್ಗೆ ಜಾಗೃತಿ ಮೂಡಿಸುವುದು ಉದ್ದೇಶವಾಗಿದ್ದು, ಸದರಿ ಕಾರ್ಯಕ್ರಮದಲ್ಲಿ ಬೆಳಗಾವಿ ನಗರ / ಜಿಲ್ಲೆಯ ಎಲ್ಲಾ ಸರ್ಕಾರಿ ಪದವಿ ಮತ್ತು ಖಾಸಗಿ ಅನುದಾನಿತ ಕಾಲೇಜುಗಳ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರು ಕಡ್ಡಾಯವಾಗಿ ಭಾಗವಹಿಸಲು ಕ್ರಮಕೈಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಅಗತ್ಯ ಸಹಕಾರ ನೀಡಲು ಸೂಚಿಸಲಾಗಿದೆ.

13/11/17

ಕಾಲೇಜು ಶಿಕ್ಷಣ ನಿರ್ದೇಶಕರು.

**ಇವರಿಗೆ:**

1) ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, , ಧಾರವಾಡ –ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2) ಬೆಳಗಾವಿ ನಗರ/ಜಿಲ್ಲೆಯ ಎಲ್ಲಾ ಸರ್ಕಾರಿ, ಮತ್ತು ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ .
3) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,ಬೆಂಗಳೂರುಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು
4) ಕಛೇರಿ ಪ್ರತಿ.